ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಸ್ಮಾರ್ಟ್‌ಸಿಟಿ ಕಾಮಗಾರಿಗಳ ಕುರಿತು

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) -

21 (216+203) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೇಂದ್ರ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯನ್ನು ಕರ್ನಾಟಕದ ಯಾವ ಯಾವ ಸಿಟಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ಮಾಹಿತಿ ಒದಗಿಸುವುದು)

(ಆ) ಚಿತ್ರದುರ್ಗ ಸ್ಮಾರ್ಟ್ ಸಿಟಿ ಯೋಜನೆ ಯಾವ ಹಂತದಲ್ಲಿದೆ ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ರಾಜ್ಯದ ಪ್ರಮುಖ ನಾಲ್ಕು ಸ್ಮಾರ್ಟ್ ಸಿಟಿಗಳಾದ ದಾವಣಗೆರೆ, ಮಂಗಳೂರು, ತುಮಕೂರು ಮತ್ತು ಬೆಳಗಾವಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಪ್ರಸ್ತುತ ಯಾವ ಹಂತದಲ್ಲಿದೆ ; (ಕಾಮಗಾರಿವಾರು ವಿವರ ನೀಡುವುದು)

(ಈ) ಸದರಿ ಕಾಮಗಾರಿಗಳು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ;

(ಉ) ಸ್ಮಾರ್ಟ್ ಸಿಟಿ ಕಾಮಗಾರಿಯ ಗುತ್ತಿಗೆದಾರರು ಮತ್ತು ಸರ್ಕಾರದ ಅಧಿಕಾರಿಗಳ ನಡುವಿನ ಸಮನ್ವಯದ ಕೊರತೆಯಿಂದ ಕೆಲಸ ನಿಧಾನವಾಗುತ್ತಿದೆ ಎನ್ನುವ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಪರಿಹಾರೋಪಾಯಗಳಾವುವು ;

(ಊ) ಸ್ಮಾರ್ಟ್ ಸಿಟಿ ಸಂಪೂರ್ಣ ಕಾಮಗಾರಿ ಪೂರ್ಣಗೊಳಿಸಲು, ಸರ್ಕಾರ ಮುಂದೆ ಯಾವ ಕಾರ್ಯಕ್ರಮ ರೂಪಿಸಲಿದೆ ? (ಸಂಪೂರ್ಣ ಮಾಹಿತಿ ನೀಡುವುದು)